2473(3361) ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ):–ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹೊಸದಾಗಿ ಆರಂಭವಾಗಿರುವ ವೈದ್ಯಕೀಯ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ;

ಆ) ಹಾಗಿದ್ದಲ್ಲಿ ಯಾವ ಯಾವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ;

ಇ) ಈ ಕಾಲೇಜುಗಳಲ್ಲಿನ ಉಪನ್ಯಾಸಕರ ಹುದ್ದೆಗೆ ಸರ್ಕಾರಿ ಸೇವೆಯಲ್ಲಿರುವ ವೈದ್ಯರನ್ನು ನಿಯೋಜನೆ ಮೇಲೆ ನೇಮಿಸಿಕೊಳ್ಳುತ್ತಿರುವುದು ನಿಜವೇ;

ಈ) ಹಾಗಿದ್ದಲ್ಲಿ ಎಂಎಸ್ಸಿ ಬಯೋ ಕೆಮಿಸ್ಟ್ರಿ, ಮೈಕ್ರೋಬಯಾಲಜಿ ಮುಂತಾದ ಸ್ನಾತಕೋತ್ತರ ಪದವಿ ಪಡೆದಿರುವ ಸೇವೆಯಲ್ಲಿರುವ ಸರ್ಕಾರಿ ನೌಕರರನ್ನು ಅಗತ್ಯವಿರುವೆಡೆ ನೇಮಕ ಮಾಡಲು ಸರ್ಕಾರಕ್ಕಿರುವ ತೊಂದರೆ ಏನು;

ಉ) ಅಗತ್ಯವಿರುವ ಕಡೆ ವೈದ್ಯಕೀಯ: ಅರೆವೈದ್ಯಕೀಯ ಹುದ್ದೆಗಳಿಗೆ ಇವರುಗಳನ್ನು ನೇಮಕ ಮಾಡುವ ಬಗ್ಗೆ ಸರ್ಕಾರ ಆದೇಶ ಹೊರಡಿಸುವುದೇ?

ಶ್ರೀ ಇಕ್ಬಾಲ್ ಅನ್ಸಾರಿ (ವೈದ್ಯಕೀಯ ಶಿಕ್ಷಣ ಸಚಿವರು):

ಅ) ಎಲ್ಲಾ ಅವಶ್ಯಕ ಕ್ರಮಗಳನ್ನು ವಹಿಸಲಾಗುತ್ತಿದೆ. ಪ್ರಥಮವಾಗಿ ಕಾಲೇಜು ಕಟ್ಟಡ ಹಾಸ್ಟೆಲ್ ಕಟ್ಟಡ ನಿರ್ಮಾಣ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ.

ಆ) ಹೌದು.

ಇ) 1998ರ ಭಾರತೀಯ ವೈದ್ಯಕೀಯ ಪರಿಷತ್ "Minimum qualification for teachers in Medical Institutions Regulations" ಪ್ರಕಾರ ನೇಮಕ ಮಾಡಬೇಕಾಗಿದೆ.

ಈ) ಉದ್ಭವಿಸುವುದಿಲ್ಲ.

2474(3362) ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ):–ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸದಾಗಿ ಆರಂಭಿಸಲಾಗುತ್ತಿರುವ ಪ್ರತಿ ವೈದ್ಯಕೀಯ ಕಾಲೇಜುಗಳಲ್ಲಿ ಲಭ್ಯವಿರುವ ಸೀಟುಗಳ ಸಂಖ್ಯೆ ಎಷ್ಟು;

ಆ) ಈ ಸೀಟುಗಳಲ್ಲಿ ಮೆರಿಟ್ ಮೂಲಕ ಅರ್ಹತೆ ಹೊಂದಿರುವ ಬಡ ವಿದ್ಯಾರ್ಥಿಗಳಿಗೆ ನಿಗದಿಪಡಿಸಿರುವ ಸೀಟುಗಳ ಸಂಖ್ಯೆ ಎಷ್ಟು;

ಇ) ಬಾಕಿ ಉಳಿದ ಸೀಟುಗಳನ್ನು ಯಾವ ರೀತಿ ಹಂಚಿಕೆ ಮಾಡಲಾಗುವುದು;

ಈ) ಮೆರಿಟ್ ಆಧಾರಿತ ಬಡ ವಿದ್ಯಾರ್ಥಿಗಳಿಗೆ ನಿಗದಿಪಡಿಸಿರುವ ಶುಲ್ಕವೆಷ್ಟು; ಇತರ ಅಭ್ಯರ್ಥಿಗಳಿಗೆ ನಿಗದಿಪಡಿಸಿರುವ ಶುಲ್ಕವೆಷ್ಟು?

ಶ್ರೀ ಇಕ್ಬಾಲ್ ಅನ್ಸಾರಿ (ವೈದ್ಯಕೀಯ ಶಿಕ್ಷಣ ಸಚಿವರು):

ಅ) ಪ್ರತಿಯೊಂದು ಕಾಲೇಜಿಗೂ ತಲಾ 100 ಸೀಟುಗಳಿಗೆ ಮಂಜೂರಾತಿ ಕೋರಿ ಕೇಂದ್ರ ಸರ್ಕಾರಕ್ಕೆ ಅರ್ಜಿ ಸಲ್ಲಿಸಲಾಗಿದೆ.

ಆ,ಇ,ಈ) ಸರ್ಕಾರದ ಪರಿಶೀಲನೆಯಲ್ಲಿದೆ.

2475(3397) ಶ್ರೀ ದೊಡ್ಡನಗೌಡ ಗುಂಡನಗೌಡ ಪಾಟೀಲ್(ಹುನಗುಂದ):- ಮಾನ್ಯ ಕೃಷಿ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾಗಲಕೋಟೆ ಜಿಲ್ಲೆಯ ಹುನಗುಂದ ತಾಲ್ಲೂಕಿನಲ್ಲಿ ಎನ್.ಆರ್.ವಿ.ಪಿ. ಯೋಜನೆ ಅಡಿಯಲ್ಲಿ ಕಾಮಗಾರಿಗಳನ್ನು ಯಾವ ವರ್ಷದಿಂದ ಪ್ರಾರಂಭಿಸಲಾಗಿದೆ;

ಆ) ಈ ಯೋಜನೆಗೆ ಪ್ರತಿ ವರ್ಷ ಖರ್ಚಾದ ಹಣವೆಷ್ಟು;

ಇ) ಈ ಯೋಜನೆಗೆ ಎಷ್ಟು ಹೆಕ್ಟೇರ್ ಪ್ರದೇಶವನ್ನು ಒಳಪಡಿಸಲಾಗಿದೆ; ಪೂರ್ಣವಿವರ ನೀಡುವುದು;

ಈ) ಸರ್ಕಾರವು ಈ ಯೋಜನೆಗೆ ಕೂಲಿ ಕಾರ್ಮಿಕರ ಬದಲಾಗಿ ಯಂತ್ರೋಪಕರಣಗಳನ್ನು ಉಪಯೋಗಿಸಿ ಕೆಲಸ ನಿರ್ವಹಿಸುತ್ತಿರುವುದು ನಿಜವೇ;

ಉ) ಹಾಗಿದ್ದಲ್ಲಿ ಈ ಯೋಜನೆಯು ಯಾವ ಹಂತದಲ್ಲಿದೆ?

ಶ್ರೀ ಕೆ. ಶ್ರೀನಿವಾಸಗೌಡ (ಕೃಷಿ ಸಚಿವರು):

ಅ) 1997–98ನೇ ಸಾಲಿನಿಂದ ಪ್ರಾರಂಭಿಸಲಾಗಿದೆ.

ಆ) ಈ ಯೋಜನೆಗೆ ಹುನಗುಂದ ತಾಲ್ಲೂಕಿನಲ್ಲಿ 7 ಜಲಾನಯನಗಳನ್ನು ಒಳಪಡಿಸಿದ್ದು ಒಟ್ಟಾರೆ ಪ್ರತಿ ವರ್ಷ ಖರ್ಚಾದ ಹಣದ ವಿವರ ಈ ಕೆಳಗಿನಂತಿದೆ.

ಕ್ರ.ಸಂ.	ವರ್ಷ	ಖರ್ಚಾದ ಹಣ (ಲಕ್ಷ ರೂ.ಗಳಲ್ಲಿ)
1.	1997–1998	15.96
2.	1998–1999	70.66
3.	1999–2000	40.35
4.	2000–2001	60.21
5.	2001–2002	0
6.	2002–2003	46.43
7.	2003–2004	41.81
8.	2004–2005	52.68
	ಒಟ್ಟು	**328.10**